ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ: ಎ.ಡಿ.ಎಂ–2(2)/ NIEPA /ರಾಷ್ಟ್ರೀಯ ಪ್ರಶಸ್ತಿ/2020–21 ದಿನಾಂಕ–19–12–2020

**–: ಜ್ಞಾಪನ :–**

ವಿಷಯ:–NIEPA ನವದೆಹಲಿ ವತಿಯಿಂದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಡಳಿತ ವ್ಯವಸ್ಥೆಯಲ್ಲಿ ನಾವೀನ್ಯತೆ ಮತ್ತು ಉತ್ತಮ ಅಭ್ಯಾಸದೊಂದಿಗೆ ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸುವ ಬಗ್ಗೆ.

ಉಲ್ಲೇಖ:– ಉಪಕುಲಪತಿ, NIEPA ನವದೆಹಲಿ ರವರ ಪತ್ರ ದಿನಾಂಕ–23–11–2020.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ **NATIONAL INSTITUTE OF EDUCATIONAL PLANNING AND ADMINISTRATION (NIEPA)** ನವದೆಹಲಿ ವತಿಯಿಂದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಡಳಿತ ವ್ಯವಸ್ಥೆಯಲ್ಲಿ ನಾವೀನ್ಯತೆ ಮತ್ತು ಉತ್ತಮ ಅಭ್ಯಾಸದೊಂದಿಗೆ ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸುತ್ತಿದ್ದು, ಅರ್ಹ ಅಧಿಕಾರಿಗಳು ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಅಗತ್ಯ ಕ್ರಮ ವಹಿಸಲು ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿದೆ.

ಸದರಿ ಕಾರ್ಯಾಗಾರದಲ್ಲಿ ಭಾಗವಹಿಸುವ ಅಧಿಕಾರಿಗಳು NIEPA ರವರು ತಿಳಿಸಿರುವ ಮಾರ್ಗಸೂಚಿಯಂತೆ ಅರ್ಜಿ ಸಲ್ಲಿಸಿ, ಶೈಕ್ಷಣಿಕ ಆಡಳಿತ ವ್ಯವಸ್ಥೆಯಲ್ಲಿ ತಾವು ಮಾಡಿರುವ ನಾವೀನ್ಯತೆ ಮತ್ತು ಅಭ್ಯಾಸವನ್ನು ಪ್ರಸ್ತುತಪಡಿಸಬಹುದಾಗಿದೆ, ವಿಜೇತ ಅಧಿಕಾರಿಗಳಿಗೆ ಸನ್ಮಾನ್ಯ ಶಿಕ್ಷಣ ಸಚಿವರು, ಭಾರತ ಸರ್ಕಾರ ರವರಿಂದ ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಲಾಗುವುದಾಗಿ ತಿಳಿಸಲಾಗಿದೆ.

ಅರ್ಜಿ ಸಲ್ಲಿಸಲು ಹೆಚ್ಚಿನ ಮಾಹಿತಿಗಾಗಿ **niepa@ac.in** ಪೋರ್ಟಲ್‌ನ ಮಾರ್ಗಸೂಚಿಗಳನ್ನು ವೀಕ್ಷಿಸುವುದು, ಹಾಗೂ ಸಂಬಂಧಿಸಿದ ನಮೂನೆಗಳಲ್ಲಿ ಮಾಹಿತಿಯನ್ನು ಭರ್ತಿ ಮಾಡಿ ಪೂರ್ಣ ಪ್ರಸ್ತಾವನೆಯನ್ನು (ದ್ವಿಪ್ರತಿಯಲ್ಲಿ) ದಿನಾಂಕ 23–12–2020 ರ ಒಳಗಾಗಿ ಈ ಕಛೇರಿ ಸಲ್ಲಿಸಲು ಈ ಮೂಲಕ ತಿಳಿಸಿದೆ.

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾ.ಶಿ.ಇ, ಇವರಿಗೆ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾ.ಶಿ.ಇ, ಇವರಿಗೆ (ಉಪನಿರ್ದೇಶಕರುಗಳ ಮುಖೇನ).
3. ಕಛೇರಿ ಪ್ರತಿ.